## ಜಿಲ್ಲಾಧಿಕಾರಿ ಹಾಗೂ ಜಿಲ್ಲಾದಂಡಾಧಿಕಾರಿ, ಮೈಸೂರು ಜಿಲ್ಲೆ, ಮೈಸೂರು ರವರ ನಡವಳಿಗಳು

ವಿಷಯ: ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟಲು ಸರ್ಕಾರದ ಆದೇಶದಂತೆ ಸಾರ್ವಜನಿಕರು ಕೆಲವು ವಿಶೇಷ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ:ಡಿಡಿ/ಎಸ್ ಎಸ್ ಯು/ಕೋವಿಡ್-19/17/19-20, ದಿನಾಂಕ: 13.03.2020.
2. ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ, ಬೆಂಗಳೂರು ರವರ ಸುತ್ತೋಲೆ ಸಂಖ್ಯೆ:- ಎಡಿಎ011/ ಸಿಆರ್284/2019-20 ದಿನಾಂಕ: 20-03-2020.

*****

DISTRICT MAGISTRATE MYSORE DISTRICT

ಪ್ರಸ್ತಾವನೆ

ಉಲ್ಲೇಖ(1)ರ ಸರ್ಕಾರದ ಆದೇಶದಂತೆ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಕೆಲವು ವಿಶೇಷ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಈಗಾಗಲೇ ಈ ಕಛೇರಿಯಿಂದ ಆದೇಶ ಹೊರಡಿಸಲಾಗಿರುತ್ತದೆ. ಅದರಂತೆ ಉಲ್ಲೇಖ(2)ರ ಸರ್ಕಾರದ ಸುತ್ತೋಲೆಯಂತೆ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಎಲ್ಲಾ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಾಲಯಗಳಲ್ಲಿ ದಿನನಿತ್ಯ ಶಾಸ್ತ್ರ ಸಂಪ್ರದಾಯದಂತೆ ನಡೆಯುವ ಧಾರ್ಮಿಕ ಪೂಜಾ ವಿಧಿ ವಿಧಾನ ಮತ್ತು ವಿವಿಧ ಸಂಪ್ರಾದಾಯಗಳನ್ನು ದೇವಾಲಯದ ಒಳಗೆ ಮತ್ತು ಒಳಪ್ರಕಾರದಲ್ಲಿ ದೇವಾಲಯದ ಅರ್ಚಕರು ಮತ್ತು ಸಿಬ್ಬಂದಿ ವರ್ಗದವರು ನಡೆಸು ಷರತ್ತಿಗೆ ಒಳಪಟ್ಟು ಉಳಿದಂತೆ ದೇವಾಲಯಗಳಲ್ಲಿ ನಡೆಯುವ ತೀರ್ಥ ವಿತರಣೆ ದಾಸೋಹ ವಿವಿಧ ಕಾರ್ಯಕ್ರಮಗಳು ಮತ್ತು ದೇವರ ದರ್ಶನ, ದೇವಾಲಯಗಳಲ್ಲಿನ ವಸತಿ ಗೃಹ / ಅತಿಥಿಗೃಹಗಳನ್ನು ಭಕ್ತಾಧಿಗಳಿಗೆ / ಸಾರ್ವಜನಿಕರಿಗೆ ದಿನಾಂಕ: 20.03.2020 ರಿಂದ ಮುಂದಿನ ಆದೇಶದ ವರೆಗೆ ರದ್ದುಪಡಿಸಿರುತ್ತಾರೆ. ಅದರಂತೆ Disaster Management Act 2005ರ ಸೆಕ್ಷನ್ 22 ಉಪಬಂಧ 2 ಹೆಚ್ ರಲ್ಲಿನ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಸದರಿ ಕಾಯ್ದೆಯ ಕಲಂ 24(a),(b),(f),(h), (j),(k), (i) ರಡಿ ಜಿಲ್ಲಾ ವಿಪತ್ತು ನಿಯಂತ್ರಣಾ ಪ್ರಾಧಿಕಾರದ ಅಧ್ಯಕ್ಷರಿಗೆ (ಜಿಲ್ಲಾಧಿಕಾರಿಗಳಿಗೆ) ಅಧಿಕಾರಗಳನ್ನು ಪ್ರತ್ಯಾಯೋಜಿಸಲಾದ ರೀತ್ಯಾ ಮತ್ತು ಸಾರ್ವಜನಿಕ ಹಿತದೃಷ್ಠಿಯಿಂದ ಕೋವಿಡ್-19 (ಕರೊನಾ ವೈರಾಣು) ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ಸಲುವಾಗಿ ಶ್ರೀ ಚಾಮುಂಡಿಬೆಟ್ಟಕ್ಕೆ ಸಾರ್ವಜನಿಕರು ಹಾಗೂ ಭಕ್ತಾಧಿಗಳ ಪ್ರವೇಶವನ್ನು, ಬೆಟ್ಟದ ವೀಕ್ಷಣಾ(View Point) ಮತ್ತು ಮೆಟ್ಟಿಲುಗಳ ಮೂಲಕ ಚಾಮುಂಡಿ ಬೆಟ್ಟಕ್ಕೆ ಬರುವುದನ್ನು ನಿಷೇಧಿಸುವುದು ಸೂಕ್ತವಾಗಿರುವುದರಿಂದ ಈ ಕೆಳಕಂಡಂತೆ ಆದೇಶಿಸಿದೆ.

MYSDC/MAG1/MLO/71/2020(E-95753) ದಿನಾಂಕ:21-03-2020

### ಆದೇಶ

ಪ್ರಸ್ತಾವನೆಯಲ್ಲಿ ಉಲ್ಲೇಖ(2) ಸರ್ಕಾರದ ಸುತ್ತೋಲೆಯಲ್ಲಿ ಎಲ್ಲಾ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಯಲ್ಲಿ ಬರುವ ಎಲ್ಲಾ ದೇವಾಲಯಗಳಲ್ಲಿ ದಿನನಿತ್ಯ ಶಾಸ್ತ್ರ ಸಂಪ್ರದಾಯದಂತೆ ನಡೆಯುವ ಧಾರ್ಮಿಕ ಪೂಜಾ ವಿಧಿ ವಿಧಾನ ಮತ್ತು ವಿವಿಧ ಸಂಪ್ರಾದಾಯಗಳನ್ನು ದೇವಾಲಯದ ಒಳಗೆ ಮತ್ತು ಒಳಪ್ರಕಾರದಲ್ಲಿ ದೇವಾಲಯದ ಅರ್ಚಕರು ಮತ್ತು ಸಿಬ್ಬಂದಿ ವರ್ಗದವರು ನಡೆಸುವ ಷರತ್ತಿಗೆ ಒಳಪಟ್ಟು ಉಳಿದಂತೆ ದೇವಾಲಯಗಳಲ್ಲಿ ನಡೆಯುವ ತೀರ್ಥ ವಿತರಣೆ, ದಾಸೋಹ, ವಿವಿಧ ಕಾರ್ಯಕ್ರಮಗಳು, ದೇವರ ದರ್ಶನ, ದೇವಾಲಯಗಳಲ್ಲಿನ ವಸತಿ ಗೃಹ / ಅತಿಥಿಗೃಹಗಳನ್ನು ಭಕ್ತಾಧಿಗಳಿಗೆ / ಸಾರ್ವಜನಿಕರಿಗೆ ಎಲ್ಲಾ ದೇವಾಲಯಗಳಲ್ಲಿ ದಿನಾಂಕ: 20.03.2020 ರಿಂದ ಮುಂದಿನ ಆದೇಶದವರೆಗೆ ರದ್ದುಪಡಿಸಿರುವುದರಿಂದ ಅಭಿರಾಮ್ ಜಿ ಶಂಕರ್, ಭಾ.ಆ.ಸೇ. ಜಿಲ್ಲಾಧಿಕಾರಿ ಮತ್ತು ಜಿಲ್ಲಾ ದಂಡಾಧಿಕಾರಿಯಾದ ನಾನು Disaster Management Act 2005ರ ಸೆಕ್ಷನ್ 22 ಉಪಬಂಧ 2 ಹೆಚ್ ರಲ್ಲಿನ ಪ್ರದತ್ತವಾದ

Scanned with CamScanner

ಅಧಿಕಾರವನ್ನು ಚಲಾಯಿಸಿ ಸದರಿ ಕಾಯ್ದೆಯ ಕಲಂ 24(a),(b),(f),(h),(j),(k),(l) ರಡಿ ಜಿಲ್ಲಾ ವಿಪತ್ತು ನಿಯಂತ್ರಣಾ ಪ್ರಾಧಿಕಾರದ ಅಧ್ಯಕ್ಷರಿಗೆ (ಜಿಲ್ಲಾಧಿಕಾರಿಗಳಿಗೆ) ಅಧಿಕಾರಗಳನ್ನು ಪ್ರತ್ಯೋಜಿಸಲಾಗಿದ್ದು ಮತ್ತು ಸಾರ್ವಜನಿಕ ಹಿತದೃಷ್ಠಿಯಿಂದ ಕೋವಿಡ್-19 (ಕರೊನಾ ವೈರಾಣು ಕಾಯಿಲೆ-2019)ಯ ಸ್ಫೋಟ ಮತ್ತು ಹರಡುವುದನ್ನು ತಡೆಗಟ್ಟುವ ನಿಟ್ಟಿನಲ್ಲಿ ಶ್ರೀಚಾಮುಂಡೇಶ್ವರಿ ದೇವಾಲಯದಲ್ಲಿ ಭಕ್ತಾಧಿಗಳಿಗೆ/ಸಾರ್ವಜನಿಕರಿಗೆ ದೇವರ ದರ್ಶನವನ್ನು, ಬೆಟ್ಟದ ವೀಕ್ಷಣಾ ಸ್ಥಳ (View Point) ಮತ್ತು ಮೆಟ್ಟಿಲುಗಳ ಮೂಲಕ ಚಾಮುಂಡಿಬೆಟ್ಟಕ್ಕೆ ಬರುವುದನ್ನೂ ಸಹ ನಿಷೇಧಿಸಿ ಪ್ರವೇಶವನ್ನು ದಿನಾಂಕ: 21.03.2020 ರಿಂದ ಮುಂದಿನ ಆದೇಶದವರೆಗೆ ರದ್ದುಪಡಿಸಿ ಆದೇಶಿಸಿದೆ.

ಆದರೆ ಚಾಮುಂಡಿ ಬೆಟ್ಟದ ನಿವಾಸಿಗಳಿಗೆ, ತುರ್ತು ಸೇವೆಗಳಿಗೆ ಹಾಗೂ ದೇವಾಲಯದ ಮತ್ತು ಗ್ರಾಮ ಪಂಚಾಯತ್ ಸಿಬ್ಬಂದಿ ವರ್ಗದವರಿಗೆ ಇದರಿಂದ ವಿನಾಯಿತಿ ನೀಡಿದೆ.

ಈ ಆದೇಶವನ್ನು ನನ್ನ ಸಹಿ ಮತ್ತು ಮೊಹರಿನೊಂದಿಗೆ ಈ ದಿನ ದಿನಾಂಕ: 21.03.2020 ರಂದು ಹೊರಡಿಸಿದೆ.

DISTRICT MAGISTRATE
MYSORE DISTRICT

21/3/20
(ಅಭಿರಾಮ್ ಜಿ.ಶಂಕರ್)
ಜಿಲ್ಲಾಧಿಕಾರಿ, ಹಾಗೂ ಜಿಲ್ಲಾ ದಂಡಾಧಿಕಾರಿ,
ಮೈಸೂರು ಜಿಲ್ಲೆ, ಮೈಸೂರು

ಪ್ರತಿಯನ್ನು:-ಕೆಳಕಂಡವರಿಗೆ ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.

1. ಪೋಲೀಸ್ ಆಯುಕ್ತರು, ಮೈಸೂರು ನಗರ, ಮೈಸೂರು.
2. ಪೋಲೀಸ್ ಅಧೀಕ್ಷಕರು, ಮೈಸೂರು ಜಿಲ್ಲೆ, ಮೈಸೂರು
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಮೈಸೂರು
4. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳು, ಮೈಸೂರು ಜಿಲ್ಲೆ, ಮೈಸೂರು.
5. ಉಪವಿಭಾಗಾಧಿಕಾರಿಗಳು, ಮೈಸೂರು/ಹುಣಸೂರು ಉಪವಿಭಾಗ.
6. ಜಿಲ್ಲೆಯ ಎಲ್ಲಾ ತಹಶೀಲ್ದಾರರುಗಳು
7. ಜಿಲ್ಲೆಯ ಎಲ್ಲಾ ದೇವಾಲಯಗಳ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ
8. ಉಪ ನಿರ್ದೇಶಕರು, ವಾರ್ತಾ ಇಲಾಖೆ, ಮೈಸೂರು ಜಿಲ್ಲೆ, ಮೈಸೂರು ರವರಿಗೆ ಕಳುಹಿಸುತ್ತಾ ದೈನಂದಿನ ಪತ್ರಿಕೆಗಳಲ್ಲಿ ಮೇಲ್ಕಂಡ ವಿಷಯವನ್ನು ಸುದ್ದಿರೂಪದಲ್ಲಿ ಪ್ರಕಟಿಸಲು ಕೋರಿದೆ.
9. ನಿಲಯ ನಿರ್ದೇಶಕರು, ಆಕಾಶವಾಣಿ, ಯಾದವಗಿರಿ, ಮೈಸೂರು ಇವರಿಗೆ ಮಾಹಿತಿಗೆ ಮತ್ತು ನಿಲಯದ ಮೂಲಕ ವಿಷಯ ಪ್ರಕಟಿಸುವ ಸಲುವಾಗಿ.

Scanned with CamScanner